# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಮಂ.ವಿ./ಪ.ವಿ./ಸಿಆರ್.14/2021-22/ಇ.12

ಕುಲಸಚಿವರ (ಪರೀಕ್ಷಾಂಗ) ಕಛೇರಿ,
ಮಂಗಳಗಂಗೋತ್ರಿ - 574 199.
ದಿನಾಂಕ: 04.10.2021.

## ಪ್ರಕಟಣೆ

2021ರ ನವೆಂಬರ್ ತಿಂಗಳಲ್ಲಿ ನಡೆಯಲಿರುವ **ಡಿಪ್ಲೋಮಾ ಇನ್ ಎನಿಮೇಷನ್ ಆ್ಯಂಡ್ ವಿಝುವಲ್ ಇಫೆಕ್ಟ್ಸ್** ಕೋರ್ಸಿನ ಲಿಖಿತ ಪರೀಕ್ಷೆಗಳು ದಿನಾಂಕ **08.11.2021**ರಿಂದ ಪ್ರಾರಂಭವಾಗಲಿರುವುದು ಎಂಬುದನ್ನು ಸದ್ರಿ ಶಿಕ್ಷಣ ನೀಡುವ ಕಾಲೇಜುಗಳ ಪ್ರಾಂಶುಪಾಲರುಗಳು ಮತ್ತು ಪರೀಕ್ಷೆಗಳಿಗೆ ಹಾಜರಾಗುವ ಎಲ್ಲಾ ಅಭ್ಯರ್ಥಿಗಳ ಗಮನಕ್ಕೆ ಈ ಮೂಲಕ ತರಲಾಗಿದೆ.

**ಸೂಚನೆಗಳು:**

1. ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು..
2. ಸವಿವರವಾದ ವೇಳಾಪಟ್ಟಿಯನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು.
3. ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕ ರೂ.120.00 (ರೂಪಾಯಿ ನೂರ ಇಪ್ಪತ್ತು)ನ್ನು ಕಾಲೇಜು ಮುಖ್ಯಸ್ಥರಲ್ಲಿ ಪಾವತಿಸಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.
4. *ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹಾಗೂ ಸದ್ರಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಶುಲ್ಕ ಪಾವತಿಸಿದ ರಶೀದಿ/ಚಲನ್‌ನ್ನು ಪ್ರತ್ಯೇಕವಾಗಿ ಎಲ್ಲಾ ವಿವರಗಳನ್ನೊಳಗೊಂಡ ಮಾಹಿತಿಯೊಂದಿಗೆ ಸಲ್ಲಿಸತಕ್ಕದ್ದು.*
5. ***ಕುಲಸಚಿವರಿಂದ ಪ್ರವೇಶಾತಿ ಮತ್ತು ವರ್ಗಾವಣೆ ಪ್ರವೇಶಾತಿ ಅನುಮೋದಿಸಲ್ಪಡದ ವಿದ್ಯಾರ್ಥಿಗಳು ಮತ್ತು ಕಡಿಮೆ ಹಾಜರಾತಿ ಪಡೆದ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.*** **ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾನಿಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾನಿಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.**
6. ವಿದ್ಯಾರ್ಥಿಗಳಿಗೆ ಇಚ್ಛೆ ಬಂದಂತೆ ಪರೀಕ್ಷಾ ಕೇಂದ್ರವನ್ನು ಆರಿಸಲು ಅವಕಾಶವಿರುವುದಿಲ್ಲ.
7. *ವಿಶ್ವವಿದ್ಯಾನಿಲಯದ ವಿನಿಯಮಾವಳಿ (ರೆಗ್ಯುಲೇಶನ್) ಪ್ರಕಾರ ಪರೀಕ್ಷೆಗೆ ಹಾಜರಾಗಲು ಅರ್ಹತೆಯನ್ನು ಹೊಂದಿದ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ.* ಸದ್ರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು. ಇಲ್ಲವಾದಲ್ಲಿ ಕಾಲೇಜಿನ ಪ್ರಾಂಶುಪಾಲರೇ ಜವಾಬ್ದಾರರಾಗುವರು.
8. ಇನ್ನಿತರ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಿರುವುದರಿಂದ (ಕಾಲೇಜು ಮತ್ತು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿ) ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡಾ ನಿಗದಿತ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ (ಇತರ ವಿದ್ಯಾರ್ಥಿಗಳೊಂದಿಗೆ) ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.
9. *ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳ ಪರೀಕ್ಷಾ ಹಣಕಾಸು ತಖ್ತೆ ಹಾಗೂ ಪರೀಕ್ಷಾರ್ಥಿಗಳ ಪಟ್ಟಿಯನ್ನು ಅನುಮೋದಿಸಲ್ಪಟ್ಟ ಪ್ರವೇಶಾನುಮೋದನೆ ಪಟ್ಟಿಯಲ್ಲಿ ಸೂಚಿಸಿರುವ ಮಾದರಿಯಲ್ಲಿ ಯಾವುದೇ ಕಾಗುಣಿತ ವ್ಯತ್ಯಾಸವಿಲ್ಲದಂತೆ ದಾಖಲಿಸಬೇಕು.*
10. ನವೆಂಬರ್ 2021ರ ಪರೀಕ್ಷೆಗೆ ಸಂಬಂಧಿಸಿದ ಆಂತರಿಕ ಮಾಪನದ ಅಂಕಗಳ ವಿವರಗಳನ್ನು ಆನ್‌ಲೈನ್ ಮುಖಾಂತರ ಸಲ್ಲಿಸಿ ಅಂತಿಮ ದೃಢೀಕೃತ ಪ್ರತಿಯನ್ನು (ದ್ವಿಪ್ರತಿಯಲ್ಲಿ) ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ 15 ದಿನಗಳ ಮುಂಚಿತವಾಗಿ ಈ ಕಛೇರಿ ಕಳುಹಿಸಿಕೊಡತಕ್ಕದ್ದು.

**ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಕಟ್ಟಲು ನಿಗದಿಪಡಿಸಲಾದ ಅಂತಿಮ ದಿನಾಂಕ: 25.10.2021**

11. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ.

12. ಅಭ್ಯರ್ಥಿಗಳು ತಮ್ಮ ಪರೀಕ್ಷಾ ಶುಲ್ಕವನ್ನು ಕಾಲೇಜು ಆಫೀಸಿನಲ್ಲಿ ಪಾವತಿಸಬೇಕು ಮತ್ತು ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಬೇಕು. ಶುಲ್ಕವನ್ನು ಪಾವತಿಸಿದ ಬಗ್ಗೆ ಪಡೆದ ರಶೀದಿಯನ್ನು ಪ್ರತ್ಯೇಕವಾಗಿ ಕಳುಹಿಸಿ ಕೊಡಬೇಕು ಹಾಗೂ ಮೊಬಲಗು, ದಿನಾಂಕ ಮತ್ತು ರಶೀದಿ ಸಂಖ್ಯೆಗಳನ್ನು ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿವರವಾಗಿ ನಮೂದಿಸಬೇಕು.

13. **ಪರೀಕ್ಷಾ ಶುಲ್ಕದ ದರ.**

| | |
|---|---|
| ಪೂರ್ಣ ಪರೀಕ್ಷೆಗೆ | ರೂ. 620.00 |
| ವಿಷಯವೊಂದಕ್ಕೆ | ರೂ. 220.00 |